ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2010ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಪಂಚಾಯತ್ ರಾಜ್ ಸಂಸ್ಥೆಗಳ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ಈ) ಕಾರ್ಯದರ್ಶಿಗಳ ವರದಿ:– ಮಾನ್ಯ ಅಧ್ಯಕ್ಷರೆ, ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ(ತಿದ್ದುಪಡಿ) ವಿಧೇಯಕ, 2011ನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ಮಂಡಿಸಲಾಯಿತು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2011
(2011ರ ವಿಧಾನ ಪರಿಷತ್ತಿನ ವಿಧೇಯಕ ಸಂಖ್ಯೆ 7)
ವಿಧಾನ ಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿ)

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 1994ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮ, 1994ನ್ನು (1994ರ ಕರ್ನಾಟಕ ಅಧಿನಿಯಮ 39) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:–

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ:– (1) ಈ ಅಧಿನಿಯಮವನ್ನು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2011 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.